# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ ಭಾಗ – 2

**(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)**

**ಬುಧವಾರ, ದಿನಾಂಕ:23ನೇ ಜೂನ್, 2021**

ಸಂಖ್ಯೆ: 49

ದಿನಾಂಕ:21ನೇ ಏಪ್ರಿಲ್, 2021ರಂದು ಹೊರಡಿಸಲಾಗಿದ್ದ ಲಘು ಪ್ರಕಟಣೆ ಸಂಖ್ಯೆ:43ರಲ್ಲಿ ಕೊರೋನ ವೈರಸ್ (ಕೋವಿಡ್-19)ನ ಎರಡನೇ ಅಲೆಯು ದೇಶದಲ್ಲಿ, ಅದರಲ್ಲಿಯೂ ವಿಶೇಷವಾಗಿ ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿದ್ದ ಹಿನ್ನಲೆಯಲ್ಲಿ ಮಾನ್ಯ ಶಾಸಕರುಗಳು ಹಾಗೂ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಸಮಿತಿ ಸಭೆಗಳನ್ನು ನಡೆಸುವುದನ್ನು ಸ್ಥಗಿತಗೊಳಸಲಾಗಿತ್ತು. ಪ್ರಸ್ತುತ ರಾಜ್ಯದಲ್ಲಿ ಕೊರೋನ ಸೋಂಕು ಇಳಿಕೆಯಾಗಿರುವುದರಿಂದ ಹಾಗೂ ಲಾಕ್‌ಡೌನ್ ಸಡಿಲಗೊಂಡಿರುವುದರಿಂದ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು, ಕೋವಿಡ್-19ರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲನೆ ಮಾಡಿ ಕರ್ನಾಟಕ ವಿಧಾನಮಂಡಲ/ವಿಧಾನ ಪರಿಷತ್ತಿನ ಎಲ್ಲಾ ಸಮಿತಿಗಳ ಸಭೆಗಳನ್ನು ತಕ್ಷಣದಿಂದ ಪ್ರಾರಂಭಿಸಲು ಮಾನ್ಯ ಸಭಾಪತಿಯವರು ಅನುಮತಿಸಿರುತ್ತಾರೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳಿಗೆ.

**www.kla.kar.nic.in/council/council.htm**